ಕರ್ನಾಟಕ ಸರ್ಕಾರ
**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ**
**ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.**

---

**ಸಂಖ್ಯೆ : ವಾಇ : ಜಂ ನಿ : ಸುಮಪ : 2021–22** **ದಿನಾಂಕ : 07–08–2021**

# ಪತ್ರಿಕಾ ಪ್ರಕಟಣೆ
**PRESS RELEASE**

## ರೋಟರಿ ಕೊಡುಗೆಯ ರಕ್ತ ಸಂಗ್ರಹಣೆ ವಾಹನಕ್ಕೆ ರಾಜ್ಯಪಾಲರ ಹಸಿರು ನಿಶಾನೆ

ಬೆಂಗಳೂರು ಆಗಸ್ಟ್ 7 (ಕರ್ನಾಟಕ ವಾರ್ತೆ):

ಬೆಂಗಳೂರು ದಕ್ಷಿಣ ರೋಟರಿ ಕ್ಲಬ್ ಅವರು ಭಾರತೀಯ ರೆಡ್ ಕ್ರಾಸ್ ಸಂಸ್ಥೆ ರಾಜ್ಯ ಶಾಖೆಗೆ ಕೊಡುಗೆಯಾಗಿ ನೀಡಿದ ರಕ್ತ ಸಂಗ್ರಹಣೆ ಮತ್ತು ವಿತರಣಾ ವಾಹನಕ್ಕೆ ಘನತೆವೆತ್ತ ರಾಜ್ಯಪಾಲರು ಹಾಗೂ ಭಾರತೀಯ ರೆಡ್ ಕ್ರಾಸ್ ಸಂಸ್ಥೆಯ ರಾಜ್ಯ ಶಾಖೆಯ ಅಧ್ಯಕ್ಷರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರು ಶನಿವಾರ ರಾಜಭವನದ ಆವರಣದಲ್ಲಿ ಚಾಲನೆ ನೀಡಿದರು.

ಬೆಂಗಳೂರು ದಕ್ಷಿಣ ರೋಟರಿ ಕ್ಲಬ್ ಅವರು ಭಾರತೀಯ ರೆಡ್ ಕ್ರಾಸ್ ಸಂಸ್ಥೆ ರಾಜ್ಯ ಶಾಖೆಗೆ ರೂ.46 ಲಕ್ಷ ಮೊತ್ತದ ಸುಸಜ್ಜಿತವಾದ ರಕ್ತ ಸಂಗ್ರಹಣೆ ಮತ್ತು ಪೂರೈಕೆ ಮಾಡುವ ಬಸ್ ಕೊಡುಗೆಯಾಗಿ ನೀಡಿದ್ದಾರೆ. ಈ ವಾಹನವು ಜಿಲ್ಲೆಯಾದ್ಯಂತ ಸಂಚರಿಸಿ ದಾನಿಗಳಿಂದ ರಕ್ತ ಸಂಗ್ರಹಿಸಿ, ಬೇಡಿಕೆ ಇರುವ ಕಡೆ ರಕ್ತ ಪೂರೈಸುವ ಮೂಲಕ ರಕ್ತದ ಕೊರತೆ ನೀಗಿಸುವ ನಿಟ್ಟಿನಲ್ಲಿ ಕಾರ್ಯನಿರ್ವಹಿಸಲಿದೆ.

ಕಾರ್ಯಕ್ರಮದಲ್ಲಿ ಭಾರತೀಯ ರೆಡ್ ಕ್ರಾಸ್ ಸಂಸ್ಥೆ ರಾಜ್ಯ ಶಾಖೆಯ ಸಭಾಪತಿ ಎಸ್ ನಾಗಣ್ಣ, ಉಪಸಭಾಪತಿ ಡಾ.ವಿ ಎಲ್ ಎಸ್ ಕುಮಾರ್, ಖಜಾಂಚಿ ಆನಂದ್ ಎಸ್ ಜಿಗಜಿನ್ನಿ, ಪ್ರಧಾನ ಕಾರ್ಯದರ್ಶಿ ಎಚ್ ಎಸ್ ಬಾಲಸುಬ್ರಮಣ್ಯ, ರೋಟರಿ ಸಂಸ್ಥೆಯ ಫಜಲ್ ಮೊಹಮ್ಮದ್, ನಾಗೇಂದ್ರ ಪ್ರಸಾದ್ ವಿ ಎಸ್, ಶ್ರೀಧರ್ ಬಿ ಆರ್ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

### ಛಾಯಾಚಿತ್ರ ಶೀರ್ಷಿಕೆ:

ಬೆಂಗಳೂರು ಆಗಸ್ಟ್ 7 (ಕರ್ನಾಟಕ ವಾರ್ತೆ):

1. ಕೇಂದ್ರ ಗಣಿ-ಕಲ್ಲಿದ್ದಲು ಹಾಗೂ ಸಂಸದೀಯ ವ್ಯವಹಾರಗಳ ಸಚಿವ ಪ್ರಹ್ಲಾದ್ ಜೋಶಿ ಅವರು ಇಂದು ಗೌರವಾನ್ವಿತ ರಾಜ್ಯಪಾಲರಾದ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರನ್ನು ರಾಜಭವನದಲ್ಲಿ ಭೇಟಿ ಮಾಡಿದರು.

1. Union Minister for Coal, Mines and Parliamentary Affairs . shri. Pralhad Joshi today paid a courtesy call on the Honorable Governor, Mr. Thawar Chand Gehlot at Rajbhavan

2. ಕರ್ನಾಟಕದ ಮಾಜಿ ಮುಖ್ಯಮಂತ್ರಿ ಡಿ ವಿ ಸದಾನಂದಗೌಡ ಅವರು ಗೌರವಾನ್ವಿತ ಶ್ರೀ ಥಾವರ್ ಚಂದ್ ಗೆಹ್ಲೋಟ್ ಅವರನ್ನು ಇಂದು ಭೇಟಿ ಮಾಡಿದರು.

2. Ex-Karnataka CM Sri DV Sadananda Gowda visited Honorable Governor Sri Thaawarchand Gehlot today at Rajbhavan.

# ಕೈಮಗ್ಗ ಉತ್ಪನ್ನಗಳನ್ನು ಖರೀದಿಸಿ ನೇಕಾರರನ್ನು ಪ್ರೋತ್ಸಾಹಿಸಿ : ಸಿದ್ದು ಕೆ. ಸವದಿ

ಬೆಂಗಳೂರು, ಆಗಸ್ಟ್ 07 ( ಕರ್ನಾಟಕ ವಾರ್ತೆ ) :

ದೇಶಿಯ ಸಾಂಪ್ರಾದಾಯಿಕ ಕೈಮಗ್ಗ ಉತ್ಪನ್ನಗಳನ್ನು ಖರೀದಿಸಿ, ಹೆಚ್ಚು ಹೆಚ್ಚಾಗಿ ಬಳಕೆ ಮಾಡುವ ಮೂಲಕ ನೇಕಾರರನ್ನು ಪ್ರೋತ್ಸಾಹಿಸಬೇಕೆಂದು ಕೈಮಗ್ಗ ಮತ್ತು ಜವಳಿ ಇಲಾಖೆಯ ಅಧ್ಯಕ್ಷರು ಹಾಗೂ ಶಾಸಕರಾದ ಸಿದ್ದು ಕೆ. ಸವದಿ ತಿಳಿಸಿದರು.

ಅವರು ಇಂದು ವಿಕಾಸಸೌಧದಲ್ಲಿ ಹಮ್ಮಿಕೊಂಡಿದ್ದ 7ನೇ ರಾಷ್ಟ್ರೀಯ ಕೈಮಗ್ಗ ದಿನಾಚಣೆ–2021ರ ಕಾರ್ಯಕ್ರಮದಲ್ಲಿ ಕೈಮಗ್ಗ ನೇಕಾರರಿಗೆ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದ ಅವರು ಪಾರಂಪರಿಕ ಉದ್ಯಮವಾದ ಕೈಮಗ್ಗ ಉದ್ದಿಮೆಯಲ್ಲಿ ರಾಜ್ಯದಲ್ಲಿ 35 ಸಾವಿರಕ್ಕೂ ಹೆಚ್ಚು ಕೈಮಗ್ಗಳಲ್ಲಿ ಲಕ್ಷಾಂತರ ಮಂದಿ ನೇಕಾರರು ಕೆಲಸ ನಿರ್ವಹಿಸುತ್ತಿದ್ದು, ಅವರ ಸಮಸ್ಯೆಗಳನ್ನು ಪರಿಹರಿಸಲು ಸರ್ಕಾರ ಸಾಕಷ್ಟು ಯೋಜನೆಗಳನ್ನು ಜಾರಿಗೊಳಿಸಿದೆ. ಇದರಿಂದಾಗಿ ನೇಕಾರರ ಸ್ಥಿತಿ ಸ್ವಲ್ಪ ಮಟ್ಟಿಗೆ ಸುಧಾರಿಸಿದೆ. ನೇಕಾರರ ಹಿತ ಕಾಪಾಡಲು ಸರ್ಕಾರವು ಇಲಾಖೆಗಳಿಗೆ ಬೇಕಾದ ಬಟ್ಟೆಗಳನ್ನು ಕೈಮಗ್ಗ ಜವಳಿ ಇಲಾಖೆಯಿಂದ ನೇರವಾಗಿ ಖರೀದಿಸಲು ಮುಂದಾಗಬೇಕು. ಇದರಿಂದ ಯುವ ನೇಕಾರರನ್ನು ಪ್ರೋತ್ಸಾಹಿಸಿದಂತಾಗುತ್ತದೆ. ನೇಕಾರರ ಶ್ರೇಯೋಭಿವೃದ್ಧಿಗಾಗಿ ಒಂದು ವರ್ಷದೊಳಗೆ ನಿಗಮವನ್ನು ಲಾಭದಾಯಕ್ಕೆ ತರಲಾಗುವುದು. ನೇಕಾರರ ಹಿತ ಕಾಪಾಡಲು ಬದ್ಧರಾಗಿದ್ದು, ಸರ್ಕಾರದಿಂದ ಇನ್ನೂ ಹೆಚ್ಚಿನ ಸೌಲಭ್ಯ ಒದಗಿಸಲು ಪ್ರಯತ್ನಿಸಲಾಗುವುದು ಎಂದರು.

ಕರ್ನಾಟಕ ರಾಜ್ಯ ಜವಳಿ ಮೂಲ ಸೌಕರ್ಯ ಅಭಿವೃದ್ಧಿ ನಿಗಮದ (ಕೆಎಸ್‌ಟಿಐಡಿಸಿ) ಅಧ್ಯಕ್ಷ ಎಸ್.ಎನ್. ಶ್ರೀರಾಮ್ ಮಾತನಾಡಿ ಮನುಷ್ಯನಿಗೆ ಅತ್ಯಅಮೂಲ್ಯವಾಗಿರುವ ಬಟ್ಟೆಯನ್ನು, ನೇಕಾರರು ತಮ್ಮ ಕೈಚಳಕದಿಂದ ಸೃಜನಾತ್ಮಕವಾಗಿ ತಯಾರಿಸಲು ಬಹಳಷ್ಟು ಶ್ರಮವಹಿಸುತ್ತಿದ್ದಾರೆ. ಇದನ್ನು ಗಮನಿಸಿದ ಸರ್ಕಾರವು ಇತ್ತೀಚಿನ ದಿನಗಳಲ್ಲಿ ಹೆಚ್ಚಿನ ಸಹಾಯ ಒದಗಿಸುವ ಜೊತೆಗೆ ಸಾಧಕರನ್ನು ಗುರುತಿಸಿ ಪ್ರಶಸ್ತಿ ಮತ್ತು ಬಹುಮಾನ ನೀಡುತ್ತಿರುವುದರಿಂದ ಅವರಿಗೆ ಹೆಚ್ಚಿನ ಉತ್ತೇಜನ ನೀಡಲಾಗುತ್ತಿದೆ. ನೇಕಾರರಿಗೆ ಸಮಸ್ಯೆ ಉಂಟಾದರೆ ಕಛೇರಿಗೆ ಭೇಟಿ ನೀಡಿದರೆ ಸಮಸ್ಯೆಯನ್ನು ಪರಿಶೀಲಿಸಿ ಬಗೆಹರಿಸಲು ಪ್ರಯತ್ನಿಸಲಾಗುವುದು ಎಂದು ತಿಳಿಸಿದರು.

ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯ (ಎಂ.ಎಸ್.ಎಂ.ಇ & ಗಣಿ) ಸರ್ಕಾರದ ಕಾರ್ಯದರ್ಶಿ ಪಂಕಜ್ ಕುಮಾರ್ ಪಾಂಡೆ ಮಾತನಾಡಿ, ಕೈಮಗ್ಗಕ್ಕೆ ವಿಶಿಷ್ಟ ಸ್ಥಾನವಿದ್ದು, ಸರ್ಕಾರದಿಂದ ಎಷ್ಟು ಸಾಧ್ಯವೊ ಅಷ್ಟು ಸಹಾಯ ಒದಗಿಸಲು ಪ್ರಯತ್ನಿಸಲಾಗುತ್ತಿದೆ. 50 ಸಾವಿರಕ್ಕೂ ಹೆಚ್ಚು ಕಾರ್ಮಿಕರು ಕಾರ್ಯನಿರ್ವಹಿಸುತ್ತಿದ್ದು, ಇವರಿಗೆ ಆರೋಗ್ಯ ವಿಮೆ, ಜೀವ ವಿಮೆ, ಅಪಘಾತ ವಿಮೆ ಸೌಲಭ್ಯ ಕಲ್ಪಿಸಲು ಪ್ರಯತ್ನಿಸುವುದರ ಜೊತೆಗೆ ಆಯುಷ್ಮಾನ್ ಯೋಜನೆಯಡಿ 1500 ನೇಕಾರರನ್ನು ಸೇರಿಸಲು ಇತ್ತೀಚೆಗೆ ಸಭೆಯಲ್ಲಿ ಚರ್ಚಿಸಲಾಗಿದೆ ಎಂದರು.

ಇದೇ ಸಂದರ್ಭದಲ್ಲಿ ರೇಷ್ಮೆ ವಲಯದಲ್ಲಿ ಪ್ರಥಮ ಸ್ಥಾನ ಪಡೆದ ಚಿಕ್ಕಬಳ್ಳಾಪುರ ಜಿಲ್ಲೆಯ ವೆಂಕಟರವಣ ಹಾಗೂ ದ್ವಿತೀಯ ಸ್ಥಾನ ಪಡೆದ ಚಾಮರಾಜನಗರ ಜಿಲ್ಲೆಯ ಕೃಷ್ಣಮೂರ್ತಿ. ಹತ್ತಿ ಉತ್ಪನ್ನ ವಲಯದಲ್ಲಿ ಪ್ರಥಮ ಸ್ಥಾನ ಪಡೆದ ಬಾಗಲಕೋಟೆ ಜಿಲ್ಲೆಯ ಮಲಕಪ್ಪ ಗಂಗಪ್ಪ ಮುಸರಿ, ಜಂಟಿಯಾಗಿ ದ್ವಿತೀಯ ಸ್ಥಾನ ಪಡೆದ ಧಾರವಾಡ ಜಿಲ್ಲೆಯ ಶ್ರೀಮತಿ ಅಕ್ಕಮಹಾದೇವಿ ಕೃಷ್ಣಾ ಬೋಜೆದಾರ ಹಾಗೂ ಶ್ರೀಮತಿ ಪರಜಾನಾ ಹಸನಸಾಬ ಶಿರಸಂಗಿ. ಉಣ್ಣೆ ಉತ್ಪನ್ನ ವಲಯದಲ್ಲಿ ಪ್ರಥಮ ಸ್ಥಾನ ಪಡೆದ ತುಮಕೂರು ಜಿಲ್ಲೆಯ ರಮೇಶ್ ಇವರಿಗೆ 2021ನೇ ಸಾಲಿನ ರಾಜ್ಯ ಮಟ್ಟದ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಹತ್ತಿ ಉತ್ಪನ್ನ ಕ್ಷೇತ್ರದಲ್ಲಿ ತಮ್ಮ ಕುಶಲತೆ ಮೆರೆದ ದಾವಣಗೆರೆ ಜಿಲ್ಲೆಯ ಪಿ.ಎನ್.ಪರಶುರಾಮ ಹಾಗೂ ತಿಮ್ಮಣ್ಣ ಇವರಿಗೆ ಪ್ರಶಂಸನಾ ಪತ್ರ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಕರ್ನಾಟಕ ರಾಜ್ಯ ಜವಳಿ ಮೂಲಕ ಸೌಕರ್ಯ ಅಭಿವೃದ್ಧಿ ನಿಗಮದ (ಕೆಎಸ್‌ಟಿಐಡಿಸಿ) ಉಪಾಧ್ಯಕ್ಷ ನೀಲಕಂಠ, ಜಿಲ್ಲೆಗಳಿಂದ ಆಗಮಿಸಿದ ನೇಕಾರರು ಉಪಸ್ಥಿತರಿದ್ದರು. ಜವಳಿ ಅಭಿವೃದ್ಧಿ ಆಯುಕ್ತರು ಹಾಗೂ ಕೈಮಗ್ಗ ಮತ್ತು ಜವಳಿ ಇಲಾಖೆಯ ನಿರ್ದೇಶಕರಾದ ಉಪೇಂದ್ರ ಪ್ರತಾಪ್ ಸಿಂಗ್ ಅವರು ಸ್ವಾಗತಿಸಿದರು.

## ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದಿಂದ ಸಾಲ ಮರುಪಾವತಿಗೆ ಮೊಬೈಲ್ ಆಪ್ ಬಿಡುಗಡೆಗೆ ಸಿದ್ದತೆ

ಬೆಂಗಳೂರು, ಆಗಸ್ಟ್ 07 ( ಕರ್ನಾಟಕ ವಾರ್ತೆ ) :

ಫಲಾನುಭವಿಗಳಿಂದ ಸಾಲ ಮರುಪಾವತಿ ಪಡೆಯಲು ಆನ್‌ಲೈನ್ ಮರುಪಾವತಿ ವಿಧಾನಗಳಾದಂತಹ Phonepe, Google pay, Paytm, etc., ಮೂಲಕ ಪಡೆಯುವ ನಿಟ್ಟಿನಲ್ಲಿ Razor pay ಕೇಂದ್ರ ಸರ್ಕಾರದ Pay Gov ಬಳಸಿ ಮರುಪಾವತಿಯನ್ನು ಸುಗಮವಾಗಿ ಪಾವತಿಸಲು ರಾಜ್ಯದಲ್ಲಿ ಪ್ರಪ್ರಥಮ ಬಾರಿಗೆ ಮೊಬೈಲ್ ಆಪ್‌ನ್ನು ನಿಗಮವು ಸಿದ್ಧಪಡಿಸಲಾಗಿದ್ದು, ಸದ್ಯದಲ್ಲೇ ಮುಖ್ಯಮಂತ್ರಿಗಳಿಂದ ಈ ಮೊಬೈಲ್ ಆಪ್‌ಗೆ ಚಾಲನೆ ನೀಡಲು ಉದ್ದೇಶಿಸಲಾಗಿದೆ ಎಂದು ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ಅಧ್ಯಕ್ಷ ಡಿ.ಎಸ್. ಅರುಣ್ ಅವರು ತಿಳಿಸಿದರು.

ಇಂದು ಕಬ್ಬನ್ ಉದ್ಯಾನವನದಲ್ಲಿ ಇರುವ ಪ್ರೆಸ್‌ಕ್ಲಬ್‌ನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಆರ್ಯವೈಶ್ಯ ಸಮುದಾಯ ನಿಗಮದ ಅಧ್ಯಕ್ಷ, ನಿಗಮದಿಂದ ಸ್ವಯಂ ಉದ್ಯೋಗ ನೇರ ಸಾಲ ಹಾಗೂ ಅರಿವು ಸಾಲ ಯೋಜನೆಗಳನ್ನು ಯಶಸ್ವಿಯಾಗಿ ಅನುಷ್ಠಾನಗೊಳಿಸಲಾಗಿರುತ್ತದೆ. ಸಾಲ – ಸೌಲಭ್ಯಗಳನ್ನು ಪಡೆದಿರುವಂತಹ ಫಲಾನುಭವಿಗಳ ಸಾಲ ಮರುಪಾವತಿಸಲು ಪ್ರತಿ ತಿಂಗಳು ದೂರವಿರುವ ಜಿಲ್ಲಾ ಕಛೇರಿಗಳಿಗೆ ಪ್ರಯಾಣ ಮಾಡಲು ಸಮಯ ಹಾಗೂ ಆರ್ಥಿಕ ವೆಚ್ಚದ ಹೊರೆ ಬೀಳುತ್ತಿರುವುದನ್ನು ಗಮನಿಸಿ ಡಿಜಿಟಲ್ ಮಾಧ್ಯಮಗಳನ್ನು ಬಳಸಿಕೊಂಡು ಸಾಲ ಮರುಪಾವತಿಗೆ ಕ್ರಮ ಕೈಗೊಳ್ಳಲು ನಿರ್ದೇಶಕ ಮಂಡಳಿ ಸಭೆಯಲ್ಲಿ ತೀರ್ಮಾನಿಸಿ, ಅನ್ ಲೈನ್ ಪಾವತಿಗೆ ಮೊಬೈಲ್ ಆಪ್‌ನ್ನು ರೂಪಿಸಲಾಗಿದೆ ಎಂದು ಅವರು ತಿಳಿಸಿದರು.

ನಿಗಮದ ವತಿಯಿಂದ ಪ್ರಥಮ ಬಾರಿಗೆ ಎಲ್ಲಾ ಯೋಜನೆಗಳ ಮಾಹಿತಿಯನ್ನು ವಿನೂತನವಾಗಿ ಕಿರುಚಿತ್ರದ ಮೂಲಕ ಹಾಗೂ ಎಲ್ಲಾ ರೀತಿಯ ಸಾಮಾಜಿಕ ಜಾಲತಾಣಗಳನ್ನು ಬಳಸಿ ವ್ಯಾಪಕ ಪ್ರಚಾರ ನೀಡಲಾಗಿರುತ್ತದೆ. ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಸ್ವೀಕರಿಸುವುದಲ್ಲದೇ ನಿಗಮದ ಎಲ್ಲಾ ಚಟುವಟಿಕೆಗಳನ್ನು ಸಂಪೂರ್ಣವಾಗಿ DIGITALIZATION ಮಾಡಲಾಗಿದೆ ಎಂದು ತಿಳಿಸಿದರು.

23 ಜಿಲ್ಲೆಗಳಲ್ಲಿ ಆರ್ಯವೈಶ್ಯ ಸಮುದಾಯದವರಿದ್ದು, ಶೇಕಡ 1% ರಷ್ಟಿರುವ ಸಮುದಾಯದ ಜನಾಂಗದಲ್ಲಿ ಸುಮಾರು ಒಂದು ಲಕ್ಷಕ್ಕೂ ಮೇಲ್ಪಟ್ಟು ಕಡುಬಡವರಿದ್ದಾರೆ. ಇವರಿಗೆ ಸ್ವಯಂ ಉದ್ಯೋಗ ದೊರೆಕಿಸಿಕೊಡುವ ನಿಟ್ಟಿನಲ್ಲಿ ನಿಗಮದಿಂದ 1 ಲಕ್ಷ ರೂಗಳ ನೇರ ಸಾಲವನ್ನು ನೀಡಲಾಗುತ್ತಿದೆ. ನಿಗಮದ ನಿರ್ದೇಶಕರುಗಳ ಸಹಕಾರದಿಂದ ಕಳೆದ 02 ವರ್ಷಗಳಲ್ಲಿ ನಿಗಮಕ್ಕೆ ಬಿಡುಗಡೆಯಾಗಿರುವ ಅಂದರೆ, 2019–20 ಹಾಗೂ 2020–2201 ನೇ ಸಾಲಿನ ಅನುದಾನ ರೂ. 16 ಕೋಟಿಗಳಲ್ಲಿ ರೂ.15.50 ಕೋಟಿ ವೆಚ್ಚದಲ್ಲಿ 1565 ಫಲಾನುಭವಿಗಳಿಗೆ ಈಗಾಗಲೇ ಸಾಲ ನೀಡಿ ಶೇ.97 ರಷ್ಟು ಪ್ರಗತಿ ಸಾಧಿಸಿರುವುದು ಹೆಮ್ಮೆಯ ವಿಷಯವಾಗಿರುತ್ತದೆ.

ಪ್ರಸ್ತುತ ನಿಗಮದಲ್ಲಿ ಪ್ರಥಮ ಸಾಲಿನಲ್ಲಿಯೇ ಒಂದು ಕೋಟಿಯಷ್ಟು ಮರುಪಾವತಿ ಮೊತ್ತ ಸ್ವೀಕೃತವಾಗಿದ್ದು, ಶೇ.75 ರಷ್ಟು ಮರುಪಾವತಿ ಆಗಿರುವುದು ನಿಗಮದ ಸಾಧನೆಯಾಗಿರುತ್ತದೆ. ಸಾಲ ಮರುಪಾವತಿಗಾಗಿ ಬಲ್ಕ್ ಎಸ್‌ಎಂಎಸ್ ಕಿರು ಚಿತ್ರಗಳು ಹಾಗೂ ವಾಯ್ಸ್ ಕಾಲ್ ಮೂಲಕ ಅಧ್ಯಕ್ಷರು ಫಲಾನುಭವಿಗಳಿಗೆ ಸಂದೇಶ ನೀಡಿರುತ್ತಾರೆ.

2021–22ನೇ ಸಾಲಿನಲ್ಲಿ ಒದಗಿಸಿದ ರೂ. 500.00 ಲಕ್ಷಗಳ ಅನುದಾನ ಸೇರಿದಂತೆ ಸ್ವೀಕೃತಿಯಾಗಿರುವ ಮರುಪಾವತಿ/ಉಳಿಕೆ ಮೊತ್ತ ರೂ. 620.00 ಲಕ್ಷಗಳಿಗೆ ಕ್ರಿಯಾ ಯೋಜನೆ ಹಾಗೂ ನೂತನ ಯೋಜನೆಗಳ ಪ್ರಸ್ತಾವನೆಗಳನ್ನು ಸರ್ಕಾರಕ್ಕೆ ಸಲ್ಲಿಸಿದೆ.

ನಿಗಮದಿಂದ ಆರ್ಯ ವೈಶ್ಯ ಆಹಾರ ವಾಹಿನಿ ಯೋಜನೆ (ಫುಡ್ ಟ್ರಕ್), ವಾಸವಿ ಜಲಶಕ್ತಿ ಯೋಜನೆ (ಕೊಳವೆ ಬಾವಿ ಕೊರೆಯಲು ಸಾಲ), ಜ್ಞಾನಜ್ಯೋತಿ ಯೋಜನೆ (ಪದವಿ ಪೂರ್ವ ಪೂರ್ಣಗೊಳಿಸಿರುವ ವಿದ್ಯಾರ್ಥಿಗಳಿಗೆ ಉಚಿತ ಲ್ಯಾಪ್‌ಟಾಪ್), ಜೀವನರಕ್ಷಾ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ (45 ವರ್ಷ ಮೇಲ್ಪಟ್ಟವರಿಗೆ ಸಾಲ/ ಸಹಾಯಧನ) ಮುಂತಾದ ಯೋಜನೆಗಳನ್ನು ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

**2021–22 ನೇ ಸಾಲಿನಲ್ಲಿ ನಿಗಮದಿಂದ ಸರ್ಕಾರಕ್ಕೆ ಸಲ್ಲಿಸಲಾದ ನೂತನ ಪ್ರಸ್ತಾವನೆಗಳು**

**ಆರ್ಯ ವೈಶ್ಯ ಆಹಾರ ವಾಹಿನಿ ಯೋಜನೆ:**

ಆರ್ಯ ವೈಶ್ಯ ಸಮುದಾಯದವರು ಪಾರಂಪರಿಕವಾಗಿ ತಿಂಡಿ ತಿನಿಸುಗಳನ್ನು ತಯಾರಿ ಮಾಡುವುದರಲ್ಲಿ ನೈಪುಣ್ಯತೆ ಹೊಂದಿರುವುದರಿಂದ ಉತ್ತಮ ಗುಣಮಟ್ಟದ ಹಾಗೂ ಆರೋಗ್ಯಕರವಾದ ತಿನಿಸುಗಳನ್ನು ಆಹಾರ ವಾಹಿನಿಯಲ್ಲಿ ಪ್ರಾರಂಭಿಸಲು ನಿಗಮದಿಂದ ಪ್ರೋತ್ಸಾಹ ನೀಡುವ ಅವಶ್ಯಕತೆ ಇರುತ್ತದೆ. ಈ ಯೋಜನೆಯಡಿ 50 ಫಲಾನುಭವಿಗಳಿಗೆ ಬ್ಯಾಂಕ್‌ಗಳ ಸಹಯೋಗದಿಂದ ಘಟಕ ವೆಚ್ಚ ಒಂದಕ್ಕೆ ರೂ. 2.00 ಲಕ್ಷಗಳ ಸಹಾಯಧನವನ್ನು ನೀಡಲಾಗುವುದು.

**ವಾಸವಿ ಜಲಶಕ್ತಿ ಯೋಜನೆ:**

ಆರ್ಯ ವೈಶ್ಯ ಸಮುದಾಯದಲ್ಲಿ ಇರುವ ಸಣ್ಣ ರೈತರಿಗೆ ಕೃಷಿ ಅಭಿವೃದ್ಧಿಗಾಗಿ ನೀರಾವರಿ ಸೌಲಭ್ಯವನ್ನು ಒದಗಿಸುವುದು ಈ ಯೋಜನೆಯ ಮುಖ್ಯ ಉದ್ದೇಶವಾಗಿರುತ್ತದೆ. ಈ ಯೋಜನೆಯಡಿಯಲ್ಲಿ ರೈತರು ಹೊಂದಿರುವ ಕೃಷಿ ಭೂಮಿಗೆ ನೀರಾವರಿ ಸೌಲಭ್ಯ ಇಲ್ಲದಿದ್ದಲ್ಲಿ ಕೊಳವೆ ಬಾವಿ ಕೊರೆಯುವುದು, ಪಂಪ್‌ಸೆಟ್ ಅಳವಡಿಸುವುದು ಮತ್ತು ವಿದ್ಯುದ್ಧೀಕರಣವನ್ನು ಮಾಡಿಸಲು ಅತೀ ಕಡಿಮೆ ಬಡ್ಡಿ ದರ ಶೇ.4 ರಂತೆ ಗರಿಷ್ಠ ರೂ. 2.00 ಲಕ್ಷ ಸಾಲ ಹಾಗೂ ವಿದ್ಯುದ್ಧೀಕರಣಕ್ಕೆ ರೂ. 50,000/– ಗಳ ಸಹಾಯಧನ ನೀಡಿ ಕೃಷಿಗೆ ಅನುವಾಗುವಂತೆ ನೆರವು ನೀಡಲು ಪ್ರಾರಂಭಿಕವಾಗಿ 30 ಫಲಾನುಭವಿಗಳಿಗೆ ಸಾಲ/ಸಹಾಯಧನ ನೀಡಲಾಗುವುದು. ಒಂದು ವೇಳೆ ಕೊಳವೆ ಬಾವಿ ಕೊರೆಯಿಸಿದಾಗ ನೀರು ಬಾರದಿದ್ದಲ್ಲಿ, ಮಂಜೂರಾದ ಸಾಲದ ಮೊತ್ತವನ್ನು 3 ವರ್ಷಗಳ ಒಳಗಾಗಿ ಪಾವತಿಸಬೇಕು, ಇದಕ್ಕೆ ಯಾವುದೇ ಬಡ್ಡಿದರ ವಿಧಿಸಲಾಗುವುದಿಲ್ಲ.

**ಜ್ಞಾನಜ್ಯೋತಿ ಯೋಜನೆ:**

ಆರ್ಯ ವೈಶ್ಯ ಸಮುದಾಯಕ್ಕೆ ಸೇರಿದ ದ್ವಿತೀಯ ಪದವಿ ಪೂರ್ವ ಶಿಕ್ಷಣವನ್ನು ಪೂರ್ಣಗೊಳಿಸಿದಂತಹ ವಿದ್ಯಾರ್ಥಿಗಳಿಗೆ ಅವರ ಮುಂದಿನ ವಿದ್ಯಾಭ್ಯಾಸಕ್ಕೆ ಅನುಕೂಲವಾಗುವಂತೆ ಮೆರಿಟ್ ಆಧಾರದನ್ವಯ ಉಚಿತವಾಗಿ ಲ್ಯಾಪ್‌ಟಾಪ್ ಅನ್ನು ರೂ. 60,000/– ಮಿತಿಯೊಳಗೆ 100 ಫಲಾನುಭವಿಗಳಿಗೆ ನೀಡಲು ಯೋಜನೆ ಹಮ್ಮಿಕೊಳ್ಳಲಾಗಿದೆ.

**ಜೀವನರಕ್ಷಾ ಸ್ವಯಂ ಉದ್ಯೋಗ ನೇರ ಸಾಲ ಯೋಜನೆ:**

ಈ ಯೋಜನೆಯಲ್ಲಿ 45 ವರ್ಷ ಮೇಲ್ಪಟ್ಟ ಆರ್ಯ ವೈಶ್ಯ ಸಮುದಾಯದವರಿಗೆ ಸ್ವಯಂ ಉದ್ಯೋಗ ಕೈಗೊಳ್ಳಲು ಕನಿಷ್ಠ ರೂ. 1,00,000/– ದಿಂದ ಗರಿಷ್ಠ ರೂ. 2,00,000/–ಗಳ ಆರ್ಥಿಕ ನೆರವು ಹಾಗೂ ಈ ಮೊತ್ತದಲ್ಲಿ ಶೇ.10 ರಷ್ಟು ಸಹಾಯಧನ ಹಾಗೂ ಉಳಿಕೆ ಮೊತ್ತ ಶೇ. 10ರಷ್ಟು ಸಹಾಯಧನ ಹಾಗೂ ಉಳಿಕೆ ಮೊತ್ತ ಶೇ.90 ರಷ್ಟು ಸಾಲವನ್ನು ವಾರ್ಷಿಕ ಶೇ.2 ರ ದರದಲ್ಲಿ ನೀಡಲು ಹಾಗೂ ವಯೊಮಾನದ ಮಿತಿಯನ್ನು 45 ವರ್ಷದಿಂದ 55 ವರ್ಷಗಳಿಗೆ ಹೆಚ್ಚಿಸಲಾಗುವುದು ಎಂದು ತಿಳಿಸಿದರು.

ಪತ್ರಿಕಾ ಗೋಷ್ಠಿಯಲ್ಲಿ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ವ್ಯವಸ್ಥಾಪಕ ನಿರ್ದೇಶಕಿ ಶ್ರೀಮತಿ ದೀಪಾಶೆಟ್ಟಿ ಸೇರಿದಂತೆ ನಿಗಮದ ನಿರ್ದೇಶಕ ಮಂಡಳಿಯ ಎಲ್ಲಾ ಸದಸ್ಯರು ಹಾಜರಿದ್ದರು.

## ಮಾಜಿ ಶಾಸಕ ರಾಜಶೇಖರ ಸಿಂಧೂರರವರ ನಿಧನಕ್ಕೆ ಮುಖ್ಯಮಂತ್ರಿಯವರಿಂದ ಸಂತಾಪ

ಬೆಂಗಳೂರು, ಆಗಸ್ಟ್ 07 ( ಕರ್ನಾಟಕ ವಾರ್ತೆ ) :

ಶಿಗ್ಗಾಂವ ಸವಣೂರ ಮತಕ್ಷೇತ್ರದ ಮಾಜಿ ಶಾಸಕರಾದ ರಾಜಶೇಖರ ಸಿಂಧೂರ, ಅವರ ನಿಧನಕ್ಕೆ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರು ತೀವ್ರ ಸಂತಾಪವನ್ನು ವ್ಯಕ್ತಪಡಿಸಿದ್ದಾರೆ.

ಸಿಂಧೂರ ಅವರು ಒಬ್ಬ ಸರಳ ಹಾಗೂ ಮೃದು ಸ್ವಭಾವದ ವ್ಯಕ್ತಿಯಾಗಿದ್ದರಲ್ಲದೆ ಜನಪ್ರಿಯ ಶಾಸಕರಾಗಿದ್ದರು. ಉದ್ಯಮದ ಕ್ಷೇತ್ರದಲ್ಲಿ ತಮ್ಮದೇ ಆದ ಛಾಪು ಮೂಡಿಸಿ ಯಶಸ್ವಿ ಉದ್ಯಮಿಯಾಗಿದ್ದರು. ಇವರ ನಿಧನದಿಂದಾಗಿ ರಾಜ್ಯವು ಉತ್ತಮ ರಾಜಕಾರಣಿಯನ್ನು ಕಳೆದುಕೊಂತಾಗಿದೆ. ಶ್ರೀಯುತರ ಅಗಲಿಕೆಯಿಂದಾದ ದುಃಖವನ್ನು ಭರಿಸುವ ಶಕ್ತಿಯನ್ನು ಅವರ ಕುಟುಂಬದವರಿಗೆ ಹಾಗೂ ಕ್ಷೇತ್ರದ ಜನತೆಗೆ ಭಗವಂತ ನೀಡಲಿ ಎಂದು ತಮ್ಮ ಸಂತಾಪದಲ್ಲಿ ತಿಳಿಸಿದ್ದಾರೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅಪಘಾತದಲ್ಲಿ ಅಗಲಿದ ಮುದುಕಣ್ಣನವರ್‌ರವರಿಗೆ ಸಚಿವ ಸಿ.ಸಿ ಪಾಟೀಲ್ ಅವರಿಂದ ತೀವ್ರ ಸಂತಾಪ

ಬೆಂಗಳೂರು, ಆಗಸ್ಟ್ 07 ( ಕರ್ನಾಟಕ ವಾರ್ತೆ ) :

ಉತ್ತರ ಕನ್ನಡ ಜಿಲ್ಲೆಯಲ್ಲಿ ಕರೆದಿದ್ದ ಇಲಾಖಾ ಸಭೆಗೆ ಈ ದಿನ ಹೋಗುತ್ತಿದ್ದ ಲೋಕೋಪಯೋಗಿ ಇಲಾಖೆಯ ಅಧಿಕಾರಿಗಳ ಕಾರು ಅಂಕೋಲಾ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 66ರ ಬಾಳೆಗುಳಿ ಬಳಿ ಅಪಘಾತಕ್ಕೀಡಾಗಿ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಮುದುಕಣ್ಣನವರ್ ಅವರು ಸ್ಥಳದಲ್ಲೇ ಮೃತಪಟ್ಟಿರುವ ವಿಷಯ ತಿಳಿದು ತುಂಬಾ ದುಃಖವಾಯಿತು. ಮೃತರ ಆತ್ಮಕ್ಕೆ ಶಾಂತಿಯನ್ನು ಕೋರುತ್ತಾ, ಇವರ ಅಗಲಿಕೆಯ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತನು ಅವರ ಕುಟುಂಬಕ್ಕೆ ನೀಡಲೆಂದು ದೇವರಲ್ಲಿ ಪ್ರಾರ್ಥಿಸುತ್ತೇನೆ.

ಕಾರಿನಲ್ಲಿದ್ದ ಉಳಿದ ನಾಲ್ಕು ಜನರಿಗೆ ಗಂಭೀರ ಸ್ವರೂಪದ ಗಾಯಗಳಾಗಿದ್ದು, ಇವರುಗಳನ್ನು ಹೆಚ್ಚಿನ ಚಿಕಿತ್ಸೆಗೆ ಆಸ್ಪತ್ರೆಗೆ ದಾಖಲಿಸಲಾಗಿದ್ದು, ಇವರುಗಳು ಸಹ ಶೀಘ್ರವಾಗಿ ಗುಣಮುಖರಾಗಲೆಂದು ಆಶಿಸುತ್ತೇನೆ ಎಂದು ಸಚಿವ ಸಿ.ಸಿ.ಪಾಟೀಲ್ ಅವರು ತಮ್ಮ ಶೋಕ ಸಂದೇಶದಲ್ಲಿ ತಿಳಿಸಿದ್ದಾರೆ.

## ಮಾಜಿ ಶಾಸಕರಾದ ರಾಜಶೇಖರ ಸಿಂಧೂರರವರ ನಿಧನಕ್ಕೆ<br>ಸಭಾಧ್ಯಕ್ಷ ವಿಶ್ವೇಶ್ವರ ಹೆಗಡೆ, ಕಾಗೇರಿ ಅವರಿಂದ ತೀವ್ರ ಸಂತಾಪ

ಬೆಂಗಳೂರು, ಆಗಸ್ಟ್ 07 ( ಕರ್ನಾಟಕ ವಾರ್ತೆ ) :

ಶಿಗ್ಗಾಂವ ಸವಣೂರ ಮತಕ್ಷೇತ್ರದ ಮಾಜಿ ಶಾಸಕರಾದ ರಾಜಶೇಖರ ಸಿಂಧೂರ, ಇವರ ನಿಧನಕ್ಕೆ ಕರ್ನಾಟಕ ವಿಧಾನಸಭೆಯ ಸಭಾಧ್ಯಕ್ಷರಾದ ವಿಶ್ವೇಶ್ವರ ಹೆಗಡೆ, ಕಾಗೇರಿ ಅವರು ಅತೀವ ಸಂತಾಪವನ್ನು ವ್ಯಕ್ತಪಡಿಸಿದ್ದಾರೆ.

ರಾಜಶೇಖರ ಸಿಂಧೂರರವರು ಒಬ್ಬ ಸರಳ–ಸಜ್ಜನ ಮತ್ತು ಜನಪ್ರಿಯ ಶಾಸಕರಾಗಿದ್ದು, ಯಶಸ್ವಿ ಉದ್ಯಮಿಯೂ ಆಗಿದ್ದವರು ಎಂಬುದನ್ನು ಸ್ಮರಿಸುತ್ತಾರೆ. ಇವರ ನಿಧನದಿಂದಾಗಿ ರಾಜ್ಯವು ಉತ್ತಮ ಜನಸೇವಕನನ್ನು ಕಳೆದುಕೊಂಡು ಬಡವಾಗಿದೆ. ಶ್ರೀಯುತರ ಅಗಲಿಕೆಯಿಂದಾದ ದುಃಖವನ್ನು ಭರಿಸುವ ಶಕ್ತಿಯನ್ನು ಭಗವಂತನು ಅವರ ಕುಟುಂಬದವರಿಗೆ ಹಾಗೂ ಕ್ಷೇತ್ರದ ಜನತೆಗೆ ನೀಡಲಿ ಎಂದು ಪ್ರಾರ್ಥಿಸುತ್ತೇನೆ.

## ಯುಪಿಎಸ್‌ಸಿ ವಿದ್ಯಾರ್ಥಿಗಳಿಗೆ ಉಚಿತವಾಗಿ ತರಬೇತಿ

ಬೆಂಗಳೂರು, ಆಗಸ್ಟ್ 07 ( ಕರ್ನಾಟಕ ವಾರ್ತೆ ) :

ಕರ್ನಾಟಕ ಆರ್ಯವೈಶ್ಯ ಮಹಾಸಭಾ ವತಿಯಿಂದ ವಾಸವಿ ಅಕಾಡೆಮಿ ಬೆಂಗಳೂರು ಇವರ ಆಶ್ರಯದಲ್ಲಿ 2022 ರಲ್ಲಿ ಯುಪಿಎಸ್‌ಸಿ ಪರೀಕ್ಷೆಗಳಲ್ಲಿ ಭಾಗವಹಿಸಲು ಇಚ್ಛಿಸುವ ವಿದ್ಯಾರ್ಥಿಗಳಿಗೆ ಉಚಿತವಾಗಿ ತರಬೇತಿ ನೀಡಲು ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿ ಸಲ್ಲಿಸುವ ಅಭ್ಯರ್ಥಿಗಳು ಕನಿಷ್ಠ ಪದವಿ ಮುಗಿಸಿರಬೇಕು ಅಥವಾ ಪದವಿಯ ಅಂತಿಮ ಸೆಮಿಸ್ಟರ್‌ನಲ್ಲಿ ಓದುತ್ತಿರುವ ವಿದ್ಯಾರ್ಥಿಗಳು ಅರ್ಜಿ ಸಲ್ಲಸಲು ಆಗಸ್ಟ್ 12, 2021 ಕೊನೆಯ ದಿನಾಂಕವಾಗಿದೆ.

ಅರ್ಜಿಗಳ ಸ್ವೀಕೃತಿ ದಿನಾಂಕ ಮುಗಿದ ನಂತರ ಪ್ರವೇಶ ಪರೀಕ್ಷೆಗಳನ್ನು ವಾಸವಿ ಅಕಾಡೆಮಿ ವತಿಯಿಂದ ನಡೆಸಿ ಗರಿಷ್ಠ 100 ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಉಚಿತ ಶಿಕ್ಷಣ ಮತ್ತು ಅನುಭವಿಗಳಿಂದ ಮಾರ್ಗದರ್ಶನ ನೀಡಲಾಗಿರುತ್ತದೆ.

ಕೋಚಿಂಗ್ ಶಿಕ್ಷಣ ಮಾಧ್ಯಮ ಇಂಗ್ಲೀಷ್ ಭಾಷೆಯಲ್ಲಿರುತ್ತದೆ. ಆಸಕ್ತ ವಿದ್ಯಾರ್ಥಿಗಳು www.vasaviacdemy.com ಗೆ ಭೇಟಿ ನೀಡಿ ಪ್ರವೇಶ ಅರ್ಜಿಗಳನ್ನು ಆನ್‌ಲೈನ್‌ನಲ್ಲಿ ಭರ್ತಿ ಮಾಡಬೇಕು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ: 8073499217 ನ್ನು ಸಂಪರ್ಕಿಸಬಹುದಾಗಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಅನಿಕೇತನ ಚಂದಾದಾರ ಅಭಿಯಾನ

ಬೆಂಗಳೂರು, ಆಗಸ್ಟ್ 07 ( ಕರ್ನಾಟಕ ವಾರ್ತೆ ) :

ಸಾಹಿತ್ಯ ಕ್ಷೇತ್ರದ ಎಲ್ಲಾ ಓದುಗ ಬಂಧುಗಳಿಗೂ ಮೌಲ್ಯಯುತವಾದ ಸಾಹಿತ್ಯ ವಿಚಾರಗಳನ್ನು ತಲುಪಿಸಬೇಕೆಂಬ ಉದ್ದೇಶದಿಂದ ಕರ್ನಾಟಕ ಸಾಹಿತ್ಯ ಅಕಾಡೆಮಿಯು ಅನಿಕೇತನ ಚಂದಾದಾರ ಅಭಿಯಾನವನ್ನು ಹಮ್ಮಿಕೊಂಡಿದೆ. ಕರ್ನಾಟಕ ಸಾಹಿತ್ಯ ಅಕಾಡೆಮಿಯು ಅನಿಕೇತನವನ್ನು 1984ರಿಂದ ಕನ್ನಡದಲ್ಲಿ ಪ್ರಾರಂಭಿಸಿ, ಸಾಹಿತ್ಯಾಸಕ್ತರ ಮೆಚ್ಚುಗೆಯನ್ನು ಪಡೆದುಕೊಂಡಿರುವುದು ವಿಶೇಷ. ಯು.ಜಿ.ಸಿಯಿಂದ ಅನುಮೋದನೆ ಪಡೆದ ಕನ್ನಡದ ಕೆಲವೇ ಪತ್ರಿಕೆಗಳಲ್ಲಿ ಅನಿಕೇತನವೂ ಒಂದು ಎಂಬುದು ಸಂತಸದ ವಿಷಯವಾಗಿದೆ. ಅನುವಾದಕ್ಕೆ ಮೀಸಲಾಗಿದ್ದ ಕನ್ನಡ ಅನಿಕೇತನದ ಸ್ವರೂಪವನ್ನು ಮಾರ್ಪಡಿಸಿ ಎಲ್ಲಾ ಸಾಹಿತ್ಯಾಸಕ್ತರಿಗೂ ಅನುಕೂಲವಾಗುವಂತಹ ಲೇಖನಗಳನ್ನು ಪ್ರಕಟಿಸುತ್ತಾ ಬರುತ್ತಿದೆ. ಅನಿಕೇತನಕ್ಕೆ ಚಂದಾದಾರರಾಗ ಬಯಸುವವರು ಅಕಾಡೆಮಿಯ ವೆಬ್‌ಸೈಟ್ ವಿಳಾಸ: www.karnatakasahithyaacademy.org ಗೆ ಭೇಟಿ ನೀಡಿ ಮಾಹಿತಿಯನ್ನು ಪಡೆಯಬಹುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ನವದೆಹಲಿಯ ಕರ್ನಾಟಕ ಭವನದಲ್ಲಿ ಖಾಲಿಯಿರುವ ವಿವಿಧ ವೃಂದದ ಹುದ್ದೆಗಳಿಗೆ ಆಯ್ಕೆ ಪಟ್ಟಿ ಪ್ರಕಟ

ಬೆಂಗಳೂರು, ಆಗಸ್ಟ್ 07 ( ಕರ್ನಾಟಕ ವಾರ್ತೆ ) :

ನವದೆಹಲಿಯ ಕರ್ನಾಟಕ ಭವನದಲ್ಲಿ ದಿನಾಂಕ:20–02–2021ರ ಅಧಿಸೂಚನೆಯಲ್ಲಿ ನವದೆಹಲಿಯ ಕರ್ನಾಟಕ ಭವನದಲ್ಲಿ ಖಾಲಿ ಇರುವ ಗ್ರೂಪ್–ಸಿ ಮತ್ತು ಗ್ರೂಪ್–ಡಿ ಹುದ್ದೆಗಳನ್ನು (ಉಳಿಕೆ ವೃಂದದ 25 ಹಾಗೂ ಹೈದ್ರಾಬಾದ್ ಕರ್ನಾಟಕ ವೃಂದದ 7 ಹುದ್ದೆ ಒಟ್ಟು 32 ಹುದ್ದೆಗಳು) ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿತ್ತು.

ಅರ್ಜಿ ಸಲ್ಲಿಸಿದ ಅರ್ಹ ಅಭ್ಯರ್ಥಿಗಳ ದಾಖಲೆ ಪರಿಶೀಲನೆಗಾಗಿ ಹಾಗೂ ಪ್ರಾವೀಣ್ಯತೆ ಪರೀಕ್ಷೆಗಳಿಗಾಗಿ (ಅನ್ವಯಿಸುವ ಹುದ್ದೆಗಳಿಗೆ ಮಾತ್ರ) 1:5 ಅನುಪಾತದಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳ ಪಟ್ಟಿಯನ್ನು www.karnatakabhavan.karnataka.gov.in ರಲ್ಲಿ ದಿನಾಂಕ: 14–07–2021 ರಂದು ಪ್ರಕಟಿಸಲಾಗಿತ್ತು. ಜುಲೈ2021 ರ 29, 30 ರಂದು ಬೆಂಗಳೂರಿನ ಕುಮಾರಕೃಪ ಅತಥಿಗೃಹದಲ್ಲಿ ಅರ್ಹ ಅಭ್ಯರ್ಥಿಗಳಲ್ಲಿ 1:5 ರಂತೆ ಆಯ್ಕೆಯಾಗಿರುವ ಅಭ್ಯರ್ಥಿಗಳ ದಾಖಲೆ ಪರಿಶೀಲನೆ ಹಾಗೂ ಪ್ರಾವೀಣ್ಯತೆ ಪರೀಕ್ಷೆಯನ್ನು (ಅನ್ವಯಿಸುವ ಹುದ್ದೆಗಳಿಗೆ ಮಾತ್ರ) ನಡೆಸಲಾಗಿತ್ತು.

ಆಯ್ಕೆಗೊಂಡಿರುವ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿಯನ್ನು ಸಂಪೂರ್ಣ ಮಾಹಿತಿ ಹಾಗೂ ವಿವರಗಳೊಂದಿಗೆ ಸಿದ್ಧಪಡಿಸಿ www.karnatakabhavan.karnataka.gov.in ರಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ದಿನಾಂಕ:06–08–2021 ರಂದು ಪ್ರಕಟಿಸಲಾಗಿದೆ.

ಆಯ್ಕೆಗೊಂಡಿರುವ ಅಭ್ಯರ್ಥಿಗಳ ತಾತ್ಕಾಲಿಕ ಆಯ್ಕೆ ಪಟ್ಟಿ ಹಾಗೂ ಕಾಯುವಿಕೆ ಪಟ್ಟಿಗೆ ಸಂಬಂಧಿಸಿದಂತೆ ಬಾಧಿತರಾಗಬಹುದಾದ ಅಭ್ಯರ್ಥಿಗಳು ತಮ್ಮ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ದಿನಾಂಕ: 17–08–2021 ರ ಸಂಜೆ 5.30 ಗಂಟೆಯೊಳಗೆ ಅಧ್ಯಕ್ಷರು ನೇರ ನೇಮಕಾತಿ ಆಯ್ಕೆ ಸಮಿತಿ ಹಾಗೂ ಉಪನಿವಾಸಿ ಆಯುಕ್ತರು (ಹೆಚ್‌ಕೆ) ಕರ್ನಾಟಕ ಭವನ (ಕಾವೇರಿ) ನಂ.10, ಕೌಟಿಲ್ಯ ಮಾರ್ಗ, ನವದೆಹಲಿ–110021 ರವರಿಗೆ ತಲುಪುವಂತೆ ಲಿಖಿತವಾಗಿ ಕಳುಹಿಸುವುದು ಅಥವಾ ಇ–ಮೇಲ್ ವಿಳಾಸ: dyrckb@gmail.com ಗೆ ಕಳುಹಿಸುವುದು. ನಿಗಧಿತ ಸಮಯದ ನಂತರ ಬರುವ ಯಾವುದೇ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ

## ಅಂತಿಮ ಆಯ್ಕೆಪಟ್ಟಿ ಪ್ರಕಟ

ಬೆಂಗಳೂರು, ಆಗಸ್ಟ್ 07 ( ಕರ್ನಾಟಕ ವಾರ್ತೆ ) :

ಕರ್ನಾಟಕ ಲೋಕಸೇವಾ ಆಯೋಗದಲ್ಲಿ ಅಧಿಸೂಚಿಸಲಾದ ವಿವಿಧ ವೃಂದದ ಹುದ್ದೆಗಳ ನೇಮಕಾತಿಗಳ ಸಂಬಂಧ ಅಂತಿಮ ಆಯ್ಕೆ ಪಟ್ಟಿ ಹಾಗೂ ಕಟ್‌ಆಫ್ ಅಂಕಗಳನ್ನು ಆಗಸ್ಟ್ 6, 2021 ರಂದು ಆಯೋಗದ ವೆಬ್‌ಸೈಟ್ ವಿಳಾಸ: http://kpsc.kar.nic.in/lists ನಲ್ಲಿ ಪ್ರಕಟಿಸಲಾಗಿದೆ.

ಅಲ್ಪಸಂಖ್ಯಾತರ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಶಾಲೆಗಳಲ್ಲಿನ ಗಣಿತ ಶಿಕ್ಷಕರು (ಉಳಿಕೆ ಮೂಲ ವೃಂದ 29+09 ಹೈ.ಕ) (ಗ್ರೂಪ್–ಸಿ) 38 ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿ, ಅಲ್ಪಸಂಖ್ಯಾತರ ನಿರ್ದೇಶನಾಲಯದ ಮೊರಾರ್ಜಿ ದೇಸಾಯಿ ವಸತಿ ಹೆಣ್ಣು ಮಕ್ಕಳ ಪದವಿ ಪೂರ್ವ ಕಾಲೇಜುಗಳಲ್ಲಿನ ನಿಯಮಪಾಲಕರು (ಮಹಿಳೆ) (ಉಳಿಕೆ ಮೂಲ ವೃಂದ 09+03 ಹೈ.ಕ) (ಗ್ರೂಪ್–ಸಿ) 12 ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿ, ಅಲ್ಪಸಂಖ್ಯಾತರ ನಿರ್ದೇಶನಾಲಯದ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯದಲ್ಲಿ ನಿಯಮಪಾಲಕರು (ಪುರುಷ) (ಉಳಿಕೆ ಮೂಲ ವೃಂದ 21+5 ಹೈ.ಕ) (ಗ್ರೂಪ್–ಸಿ) 26 ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿ, ಅಲ್ಪಸಂಖ್ಯಾತರ ನಿರ್ದೇಶನಾಲಯದ ಮೆಟ್ರಿಕ್ ನಂತರದ ವಿದ್ಯಾರ್ಥಿ ನಿಲಯದಲ್ಲಿ ನಿಯಮಪಾಲಕರು (ಮಹಿಳೆ) (ಉಳಿಕೆ ಮೂಲ ವೃಂದ 32+5 ಹೈ.ಕ) (ಗ್ರೂಪ್–ಸಿ) 37 ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿ, ಡಾ.ಬಿ.ಆರ್.ಅಂಬೇಡ್ಕರ್ ಅಭಿವೃದ್ಧಿ ನಿಗಮದಲ್ಲಿನ ಲೆಕ್ಕಸಹಾಯಕರು (ಉಳಿಕೆ ಮೂಲ ವೃಂದ 15+3 ಹೈ.ಕ) (ಗ್ರೂಪ್–ಸಿ) 18 ಹುದ್ದೆಗಳ ಅಂತಿಮ ಆಯ್ಕೆ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗಿದೆ ಎಂದು ಕರ್ನಾಟಕ ಲೋಕಸೇವಾ ಆಯೋಗದ ಕಾರ್ಯದರ್ಶಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ನೀರಿನ ಪೂರೈಕೆಯಲ್ಲಿ ವ್ಯತ್ಯಯ

ಬೆಂಗಳೂರು, ಆಗಸ್ಟ್ 07 ( ಕರ್ನಾಟಕ ವಾರ್ತೆ ) :

ಬೆಂಗಳೂರು ಜಲಮಂಡಳಿ ವ್ಯಾಪ್ತಿಯ ಎನ್.ಸಿ. ಕಾಲೋನಿ ಸಮೀಪ ಇರುವ ಬೋರ್ ಬ್ಯಾಂಕ್ ರಸ್ತೆಯಲ್ಲಿರುವ ಎಸ್.ಡಬ್ಲ್ಯೂ.ಡಿ. ನಲ್ಲಿ ಹಳೆಯ 700 ಮಿ.ಮೀ. ವ್ಯಾಸದ ಪಿ.ಎಸ್.ಸಿ. ನೀರಿನ ಕೊಳವೆ ಮಾರ್ಗದ ಬದಲಿಗೆ 600 ಮಿ.ಮೀ. ವ್ಯಾಸದ ಎಂ.ಸ್.ನೀರಿನ ಕೊಳವೆಯ ಜೋಡಣೆ ಕಾಮಗಾರಿಯನ್ನು ಕೈಗೆತ್ತಿಕೊಂಡಿರುವುದರಿಂದ ದಿನಾಂಕ: 09-08-2021 ರಂದು ಬೆಳಿಗ್ಗೆ: 07:00 ಗಂಟೆಯಿಂದ ಸಂಜೆ:07:00 ಗಂಟೆಯವರೆಗೆ ಬ್ಯಾಡರಹಳ್ಳಿ, ಹ್ಯಾರಿಸ್ ರಸ್ತೆ, ಮಿಲ್ಲರ್ಸ್ ರಸ್ತೆ, ಬೋರ್ ಬ್ಯಾಂಕ್ ರಸ್ತೆ, ಎನ್.ಸಿ.ಕಾಲೋನಿ, ಎಸ್.ಕೆ.ಗಾರ್ಡನ್, ಚಿನ್ನಪ್ಪ ಗಾರ್ಡನ್, ಎ.ಕೆ.ಕಾಲೋನಿ, ಪೆರಿಯಾರ್ ನಗರ, ಕುಶಾಲ್ ನಗರ, ಮುನೇಶ್ವರ ನಗರ, ಸಗಾಯಪುರಂ, ಬಿಡಿಎ ಲೇಔಟ್, ರಾಮ ಟೆಂಟ್‌ರಸ್ತೆ, ಪಿ&ಟಿ ಕಾಲೋನಿ, ಅನ್ವರ್ ಲೇಔಟ್ ಕಾಡುಗೋಂಡನಹಳ್ಳಿ, ಮಾರುತಿ ಸೇವಾನಗರ, ಜೀವನಹಳ್ಳಿ, ಹಚ್ಚಿನ್ಸ್ ರಸ್ತೆ, ಪುಲಿಕೇಶಿನಗರ, ಫ್ರೇಜರ್ ಟೌನ್ ಹಾಗೂ ಸುತ್ತಮುತ್ತಲಿನ ಪ್ರದೇಶಗಳಲ್ಲಿ ನೀರಿನ ಪೂರೈಕೆಯಲ್ಲಿ ವ್ಯತ್ಯಯವಾಗಲಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## Disruption of water supply

Bengaluru August 07,(Karnataka Information):

BWSSB has taken a linking work of 600 mm dia MS pipe line in place 700 mm dia old PSC water pipe line at SWD in Bore bank road on 09-08-2021 from 07:00 am to 07:00 pm. Hence water supply will be disrupted areas Byadarahalli, Haris road, Millers Road, Bore bank road, N.C.Colony, N.K.Garden, Chinnappa garden, N.K.Colony, Periyar nagar, Kushal nagar, Muneshwara nagar, Sagayapuram, BDA Layout, Rama tent road, P&T colony, Anwar layout Kadugondanahalli, Maruti sevanagara, Jeevanahalli, Hutchins road, Pulikeshi nagar, Frazer Town and surrounding places. Public are requested to co-operate with the board.

### ಬೆಂಗಳೂರು ನಗರದಲ್ಲಿ ಸ್ಥಾಪಿಸಿರುವ ವಾಯು ಗುಣಮಟ್ಟ ಮಾಪನ ಕೇಂದ್ರಗಳ ವಾಯು ಗುಣಮಟ್ಟ ಸೂಚ್ಯಂಕ

**ವಾಯುಗುಣಮಟ್ಟ ಸೂಚ್ಯಂಕ (AQI), ಬೆಂಗಳೂರು**

**ದಿನಾಂಕ: 7.8.2021 (Average of past 24 hours)**

| ಕ್ರಮ ಸಂಖ್ಯೆ | ಮಾಪನ ಕೇಂದ್ರಗಳ ಹೆಸರು | ವಾಯುಗುಣಮಟ್ಟ ಸೂಚ್ಯಂಕ (AQI) | ವರ್ಗ | ಪ್ರಮುಖ ಮಾಲಿನ್ಯಕಾರಕ |
|---|---|---|---|---|
| 1 | ಪಶುವೈದ್ಯಕೀಯಕಾಲೇಜು, ಹೆಬ್ಬಾಳ | 35 | ಉತ್ತಮ | $PM_{10}$ |
| 2 | ಜಯನಗರ 5ನೇ ಬ್ಲಾಕ್, ಶಾಲಿನಿ ಮೈದಾನ | 37 | ಉತ್ತಮ | $NO_2$ |
| 3 | ಕವಿಕ, ಮೈಸೂರುರಸ್ತೆ | 45 | ಉತ್ತಮ | $PM_{2.5}$ |
| 4 | ರಾಜೀವ್‌ಗಾಂಧಿಎದೆರೋಗಗಳ ಸಂಸ್ಥೆ, ನಿಮ್ಹಾನ್ಸ್ ಹೊಂಬೆಗೌಡನಗರ | 45 | ಉತ್ತಮ | $PM_{10}$ |
| 5 | ಹೆಚ್.ಎಸ್.ಆರ್ ಲೇಔಟ್, ಕೇಂದ್ರರೇಷ್ಮೆ ಮಂಡಳಿ ಹತ್ತಿರ | 84 | ತೃಪ್ತಿಕರ | $PM_{10}$ |

| | | | | |
|---|---|---|---|---|
| 6 | ನಗರರೈಲ್ವೆ ನಿಲ್ದಾಣ, ಮೆಜೆಸ್ಟಿಕ್, ಬೆಂಗಳೂರು | 55 | ತೃಪ್ತಿಕರ | $PM_{10}$ |
| 7 | ಸಾಣೆಗುರುವನಹಳ್ಳಿ, ನಿಸರ್ಗ ಭವನ, ಕರ್ನಾಟಕರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ, ಶಿವನಗರ | 42 | ಉತ್ತಮ | $PM_{10}$ |
| **(7.8.2021 at 11.05 AM)** | | | | |
| 8 | BWSSB,ಕಾಡಬೀಸನಹಳ್ಳಿ | 50 | ಉತ್ತಮ | $PM_{10}$ |
| 9 | ಪೀಣ್ಯ | * | * | * |
| 10 | ಬಿಟಿಎಂ ಲೇಔಟ್ | 52 | ತೃಪ್ತಿಕರ | $PM_{10}$ |

| ವರ್ಗ(ಶ್ರೇಣಿ) | ಉಂಟಾಗಬಹುದಾದಆರೋಗ್ಯ ಪರಿಣಾಮಗಳು |
|---|---|
| **ಉತ್ತಮ (0–50)** | ಕನಿಷ್ಠ ಪರಿಣಾಮ |
| **ತೃಪ್ತಿಕರ (51–100)** | ಸೂಕ್ಷ್ಮ ಜನರಿಗೆ ಸಣ್ಣ ಉಸಿರಾಟದ ಅಸ್ವಸ್ಥತೆ |
| **ಸಾಧಾರಣ (101–200)** | ಶ್ವಾಸಕೋಶ, ಹೃದಯಕಾಯಿಲೆಯವರು, ಮಕ್ಕಳು ಮತ್ತು ಹಿರಿಯ ವಯಸ್ಕರಿಗೆ ಉಸಿರಾಟದ ಅಸ್ವಸ್ಥತೆ |
| **ಕಳಪೆ (201–300)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಉಸಿರಾಟದ ಅಸ್ವಸ್ಥತೆ |
| **ಅತಿ ಕಳಪೆ (301–400)** | ದೀರ್ಘಕಾಲಿಕಒಡ್ಡುವಿಕೆಯಿಂದಜನರಿಗೆ ಶ್ವಾಸಕೋಶದಅಸ್ವಸ್ಥತೆ |
| **ತೀವ್ರ (>401)** | ಆರೋಗ್ಯವಂತಜನರಿಗೂ ಉಸಿರಾಟದ ಅಸ್ವಸ್ಥತೆ |

## AQI of the CAAQM stations established in Bengaluru City

**Date : 7.8.2021 (Average of past 24 hours)**

| Sl. No. | Station | AQI | Category | Prominent Pollutant |
|---|---|---|---|---|
| 1 | Veterinary College Hebbal | 35 | Good | $PM_{10}$ |
| 2 | Jayanagar 5th Block, Shalini ground | 37 | Good | $NO_2$ |
| 3 | KAVIKA, Mysore Road | 45 | Good | $PM_{2.5}$ |
| 4 | Rajeev Gandhi Institute of Chest Disease, NIMHANS, Hombegowda Nagar | 45 | Good | $PM_{10}$ |
| 5 | HSR Layout, near Central Silkboard | 84 | Satisfactory | $PM_{10}$ |
| 6 | City Railway Station, Magestic, Bengaluru | 55 | Satisfactory | $PM_{10}$ |
| 7 | Saneguruvanahalli, NisargaBhavan, KSPCB, Shivanagara | 42 | Good | $PM_{10}$ |

| (7.8.2021 at 11.05 AM) | | | | |
|---|---|---|---|---|
| 8 | BWSSB, Kadabesanahalli | 50 | Good | $PM_{10}$ |
| 9 | Peenya | * | * | * |
| 10 | BTM Layout | 52 | Satisfactory | $PM_{10}$ |

* Data not available

| **Category (Range)** | **Possible Health Impacts** | **Category (Range)** | **Possible Health Impacts** |
|---|---|---|---|
| Good (0–50) | Minimal Impact | Poor (201–300) | Breathing discomfort to people on prolonged exposure |
| Satisfactory (51–100) | Minor breathing discomfort to sensitive people | Very Poor (301–400) | Respiratory illness to the people on prolonged exposure |
| Moderate (101–200) | Breathing discomfort to the people with lung, Heart disease, children and older | Severe (>401) | Respiratory effects even on healthy people |